**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 686/2014**

**ಪಿ.ಡಬ್ಲ್ಯೂಃ 18**

**ಸಿ.ಡಬ್ಲ್ಯೂಃ 21**

**ಹೆಸರು** ಃ ಬಿ.ಹೆಚ್ ಚಂದ್ರಶೇಖರ್

ತಂದೆಯ **ಹೆಸರು** ಃ ಹರಿರಾವ್

**ವಯಸ್ಸು** ಃ 67 **ವರ್ಷ**

**ಉದ್ಯೋಗ** ಃ ನಿವೃತ್ತ ಎ ಎಸ್ ಐ

**ವಾಸಸ್ಥಳ** ಃ ಭದ್ರಾವತಿ

**ದಿನಾಂಕಃ 19-09-2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಸ.ಸ.ಅ. ರವರಿಂದ.**

ನಾನು *2011* ರಿಂದ ಮಾರ್ಚ *2015* ರವರೆಗೆ ವರ್ಷಗಳಿಂದ ಲಕ್ಕವಳ್ಳಿ **ಪೋಲೀಸ್ ಠಾಣೆಯಲ್ಲಿ** ಎ ಎಸ್ ಐ **ಆಗಿ ಕರ್ತವ್ಯ** ನಿರ್ವಹಿಸಿರುತ್ತೇನೆ.

ದಿನಾಂಕಃ *14-03-2014* ರಂದು ಸಂಜೆ *5-00* ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ-*2* ರವರು ಚಾಸಾ -*1*ರವರು ನೀಡಿರುವ ಲಿಖಿತ ದೂರನ್ನು ನೀಡಿದ್ದು, ಸದರಿ ದೂರನ್ನು ನಾನು ಸ್ವೀಕರಿಸಿ ನಮ್ಮ ಠಾಣಾ ಮೊಕದ್ದಮೆ ಸಂಖ್ಯೆ *57/2014* ರಂತೆ ಪ್ರಕರಣವನ್ನು ದಾಖಲು ಮಾಡಿಕೊಂಡು ಪ್ರಥಮ ವರ್ತಮಾನ ವರದಿಯನ್ನು ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ದಿನಾಂಕಃ *15-03-2014* ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ಮಾಡಿ, ಪಂಚರವನ್ನು ಬರಮಾಡಿಕೊಂಡು ಸ್ಥಳ ಪಂಚನಾಮೆ ಕ್ರಮವನ್ನು ಜರುಗಿಸಿ ಸದರಿ ಮಹಜರ್ ಕ್ರಮವವನ್ನು ಬೆಳಿಗ್ಗೆ *11-30* ಗಂಟೆಯಿಂದ *12-00* ಗಂಟೆಯವರೆಗೆ ಜರುಗಿಸಿರುತ್ತೇನೆ. ಚಾಸಾ-*6* ಮತ್ತು *7*ರವರ ಹೇಳಿಕೆಗಳನ್ನು ದಾಖಲು ಮಾಡಿಕೊಂಡಿರುತ್ತೇನೆ.

ದಿನಾಂಕಃ *26-03-2014* ರಂದು ಚಾಸಾ-*14*ರವರು ಠಾಣೆಗೆ ಹಾಜರಾಗಿ ದಾಖಲಾತಿಗಳಾದ ಅಸಸ್ ಮೆಂಟ್ ಕಾಫಿ ಮತ್ತು ಎರಡು ಸಭಾ ನಡವಳಿಕೆ ಪುಸ್ತಕಗಳನ್ನು ಹಾಜರುಪಡಿಸಿದ್ದು,

ಅವುಗಳನ್ನು ಮಹಜರ್ ಮುಖಾಂತರ ಅಮಾನತ್ತು ಪಡಿಸಿಕೊಂಡಿರುತ್ತೇನೆ. ಸದರಿ ವಿಚಾರವನ್ನು ಮಾಲು ಪಟ್ಟಿ ಸಂಖ್ಯೆ *38/2014* ರಲ್ಲಿ ನಮೂದು ಮಾಡಿ ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-*22* ರವರಿಗೆ ವರ್ಗಾಯಿಸಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ದೂರು ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-*1* ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-*1*(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-*4* ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-*4*(ಇ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅಸಸ್ ಮೆಂಟ್ ರಿಜಿಸ್ಟರ್ ನ ದೃಢೀಕೃತ ನಕಲಾಗಿದ್ದು, ಸದರಿ ದಾಖಲೆಯನ್ನು ನಿಪಿ-*6* ಎಂದು, ಸಾಕ್ಷಿಯ ಸಹಿಯನ್ನು ನಿಪಿ-*6*(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅಮಾನತ್ತು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-*5* ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-*5*(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಪ್ರಥಮ ವರ್ತಮಾನ ವರದಿ ಆಗಿದ್ದು, ಸದರಿ ದಾಖಲೆಯನ್ನು ನಿಪಿ-*9* ಎಂದು, ಸಾಕ್ಷಿಯ ಸಹಿಯನ್ನು ನಿಪಿ-*9*(ಎ) ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರಿದ ಮುಖ್ಯ ವಿಚಾರಣೆಗೆ ಸಮಾಯಾವಕಾಶ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

ಸಿಸಿ.*686-2014*

*(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)*

ಓ. ಕೇ. ಸ. ಇ. ಎ. ಒ.

Sd/-

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**